ಜಮೀನುಗಳಿಗೆ ಪೋಡು ಮಾಡುವುದು

92 (256) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ ಕ್ಷೇತ್ರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ದೇವನಹಳ್ಳಿ ವಿಧಾನಸಭಾ – ಕ್ಷೇತ್ರದ ವ್ಯಾಪ್ತಿಯಲ್ಲಿರುವ ರೈತರುಗಳ ಜಮೀನುಗಳಿಗೆ ತತ್ಕಾಲ್ ಪೋಡಿ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ? ಹಾಗಿದ್ದಲ್ಲಿ ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಜೆ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಹೌದು. ತತ್ಕಾಲ್ ಪೋಡಿ ಯೋಜನೆಯಂತೆ ಪ್ರಕರಣಗಳನ್ನು ವಿಲೇವಾರಿ ಮಾಡಲು ಸರ್ಕಾರದ ಆದೇಶದ ಸಂಖ್ಯೆ : ಕಂಇ 142 ಭೂದಸ 2008 ದಿನಾಂಕ: 12.8.2008ರ ಮೇರೆಗೆ ರಾಜ್ಯದಾದ್ಯಂತ ಈಗಾಗಲೇ ಎಲ್ಲಾ ತಾಲ್ಲೂಕುಗಳಲ್ಲಿ ತತ್ಕಾಲ್ ಪೋಡಿ ಯೋಜನೆಯಡಿಯನ್ನು ಪ್ರಾರಂಭಿಸಲಾಗಿದ್ದು, ದೇವನಹಳ್ಳಿ ತಾಲ್ಲೂಕಿನಲ್ಲಿ 224 ಅರ್ಜಿಗಳು ಸ್ವೀಕೃತವಾಗಿದ್ದು, ಸದರಿ ಅರ್ಜಿಗಳ ಪೈಕಿ 212 ಅರ್ಜಿಗಳು ವಿಲೇಯಾಗಿರುತ್ತದೆ. 12 ಅರ್ಜಿಗಳು ಬಾಕಿ ಇರುತ್ತದೆ.

ದೇವನಹಳ್ಳಿ ಕ್ಷೇತ್ರದಲ್ಲಿ ಕೈಗಾರಿಕಾ ಶೆಡ್ಡುಗಳ ನಿರ್ಮಾಣದ ಬಗ್ಗೆ

93 (257) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಕೈಗಾರಿಕಾ ಅಭಿವೃದ್ಧಿ ಮಂಡಳಿಯಿಂದ ಎಷ್ಟು ಕೈಗಾರಿಕಾ ಶೆಡ್ಡುಗಳನ್ನು ನಿರ್ಮಾಣ ಮಾಡಲಾಗಿದೆ;

ಆ) ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗಾಗಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ? (ವಿವರ ಒದಗಿಸುವುದು);